# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1522 |
| ಸದಸ್ಯರ ಹೆಸರು | ಶ್ರೀ ಎಸ್. ರವಿ<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | 21-03-2025 |
| ಉತ್ತರಿಸುವ ಸಚಿವರು | ಕೃಷಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ವಿತರಣೆಯಾಗುತ್ತಿರುವ ಸಬ್ಸಿಡಿ ಯೂರಿಯಾವನ್ನು (ಗೊಬ್ಬರ) ಅಕ್ರಮವಾಗಿ ಕೈಗಾರಿಕೆಗಳಿಗೆ ಮಾರಾಟ ಮಾಡುತ್ತಿರುವ ಪ್ರಕರಣಗಳು ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯದಲ್ಲಿ ಸಹಾಯಧನದ ಯೂರಿಯಾ ರಸಗೊಬ್ಬರವನ್ನು ಕೃಷಿಯೇತರ ಚಟುವಟಿಕೆಗಳಿಗೆ/ಕೈಗಾರಿಕೆಗಳಿಗೆ ಬಳಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ) | ಬಂದಿದ್ದಲ್ಲಿ, ಇಂತಹ ಎಷ್ಟು ಪ್ರಕರಣಗಳನ್ನು ಪತ್ತೆ ಮಾಡಲಾಗಿದೆ; | ಪ್ರಸಕ್ತ ಸಾಲಿನಲ್ಲಿ, ರಾಜ್ಯದಲ್ಲಿ ಸಹಾಯಧನದ ಯೂರಿಯಾ ರಸಗೊಬ್ಬರವನ್ನು ಅಕ್ರಮವಾಗಿ ಸಾಗಿಸುತ್ತಿದ್ದ 04 ಪ್ರಕರಣಗಳು (ತುಮಕೂರು, ಚಿಕ್ಕಬಳ್ಳಾಪುರ, ಧಾರವಾಡ ಮತ್ತು ಚಿತ್ರದುರ್ಗ ಜಿಲ್ಲೆ) ದಾಖಲಾಗಿದ್ದು, ಸದರಿ ಪ್ರಕರಣಗಳ ಸಂಬಂಧ ತಪ್ಪಿತಸ್ಥರ ವಿರುದ್ಧ ಸಂಬಂಧಪಟ್ಟ ಪೋಲೀಸ್ ಠಾಣೆಗಳಲ್ಲಿ ಎಫ್.ಐ.ಆರ್ ದಾಖಲಿಸಲಾಗಿದೆ. |
| ಇ) | ಅಕ್ರಮ ಯೂರಿಯಾ ಮಾರಾಟವನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ವಿವರ ನೀಡುವುದು) | ಸಹಾಯಧನದ ಯೂರಿಯಾ ರಸಗೊಬ್ಬರವನ್ನು ಕೃಷಿಯೇತರ ಚಟುವಟಿಕೆಗಳಿಗೆ ಬಳಕೆಯಾಗದಂತೆ ತಡೆಯಲು ರಾಜ್ಯದಲ್ಲಿ ರಸಗೊಬ್ಬರ ಪರಿವೀಕ್ಷಕರನ್ನು ರಸಗೊಬ್ಬರ (ನಿಯಂತ್ರಣ) ಆದೇಶ, 1985 ಕ್ಲಾಸ್ 27ರಡಿ ಅಧಿಸೂಚಿಸಲಾಗಿರುತ್ತದೆ.<br><br>ರಸಗೊಬ್ಬರ (ನಿಯಂತ್ರಣ) ಆದೇಶ, 1985 ಮತ್ತು ಅಗತ್ಯ ವಸ್ತುಗಳ ಕಾಯ್ದೆ, 1955ರ ಉಲ್ಲಂಘನೆಗಳಿಗೆ ಸಂಬಂಧಿಸಿದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು, ಅಪರ ಕೃಷಿ ನಿರ್ದೇಶಕರ ನೇತೃತ್ವದಲ್ಲಿ ಜಾಗೃತ ಕೋಶ ಸೃಜಿಸಲಾಗಿದೆ ಮತ್ತು ಇವರ ಅಧೀನದಲ್ಲಿ ರಾಜ್ಯದ ನಾಲ್ಕು ವಿಭಾಗಗಳಲ್ಲಿ (ಬೆಂಗಳೂರು, ಮೈಸೂರು, ಕಲಬುರಗಿ ಮತ್ತು ಬೆಳಗಾವಿ) ಜಂಟಿ ಕೃಷಿ ನಿರ್ದೇಶಕರು (ಜಾಗೃತ ಕೋಶ) ಕಾರ್ಯನಿರ್ವಹಿಸುತ್ತಿದ್ದಾರೆ. ಜಾಗೃತ ಕೋಶದ |

| | | |
|---|---|---|
| | | ಅಧಿಕಾರಿಗಳು ಮತ್ತು ಅಧಿಸೂಚಿಸಿರುವ ಇತರೆ ರಸಗೊಬ್ಬರ ಪರಿವೀಕ್ಷಕರು ದೂರುಗಳನ್ನು ಆಧರಿಸಿ/ಅನಿರೀಕ್ಷಿತವಾಗಿ/ಆಗ್ಗಿಂದಾಗ್ಗೆ ಅವರ ವ್ಯಾಪ್ತಿಯಲ್ಲಿನ ಯೂರಿಯಾ ಬಳಸುತ್ತಿರುವ ಕೈಗಾರಿಕೆಗಳಿಗೆ ನಿಯಮಿತವಾಗಿ ಭೇಟಿ ನೀಡಿ ಪರಿಶೀಲನೆಯನ್ನು ಕೈಗೊಂಡು ರಸಗೊಬ್ಬರ (ನಿಯಂತ್ರಣ) ಆದೇಶ, 1985 ಮತ್ತು ಅಗತ್ಯ ವಸ್ತುಗಳ ಕಾಯ್ದೆ, 1955ರ ಉಲ್ಲಂಘನೆ ಕಂಡುಬಂದಲ್ಲಿ ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ.<br><br>ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ, ಯೂರಿಯಾ ರಸಗೊಬ್ಬರವನ್ನು ಕಚ್ಚಾ ವಸ್ತುವಾಗಿ ಬಳಸುತ್ತಿರುವ ವಿವಿಧ ಉತ್ಪಾದನಾ ಘಟಕಗಳನ್ನು ಪರಿಶೀಲಿಸಲು ಜಿಲ್ಲಾಡಳಿತ, ಪೊಲೀಸ್ ಇಲಾಖೆ, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಕೃಷಿ ಇಲಾಖೆ ಮತ್ತು ಅಗತ್ಯವಿರುವ ಇತರೆ ಇಲಾಖೆಗಳನ್ನು ಒಳಗೊಂಡು ಸಮಿತಿಗಳನ್ನು ರಚಿಸಲಾಗಿದೆ.<br><br>ಮುಂದುವರೆದು, ರಾಜ್ಯದ ಗಡಿ ಹೊಂದಿರುವ ಜಿಲ್ಲೆಗಳ ಚೆಕ್ ಪೋಸ್ಟ್‌ಗಳಲ್ಲಿ ಅಕ್ರಮವಾಗಿ ಯೂರಿಯಾ ರಸಗೊಬ್ಬರವನ್ನು ಹಾಗೂ ಇನ್ನಿತರೆ ರಸಗೊಬ್ಬರಗಳ ಸಾಗಾಣಿಕೆಯ ಬಗ್ಗೆ ಇಲಾಖೆ ಮತ್ತು ಹತ್ತಿರದ ಪೋಲೀಸ್ ಠಾಣೆಗೆ ಮಾಹಿತಿ ನೀಡಲು ಸಂಬಂಧಪಟ್ಟ ಇಲಾಖೆಗಳಿಗೆ ಜಿಲ್ಲಾಧಿಕಾರಿಗಳ ಮೂಲಕ ನಿರ್ದೇಶನ ನೀಡಿ ಕಟ್ಟುನಿಟ್ಟಿನ ಕ್ರಮ ವಹಿಸಲಾಗುತ್ತಿದೆ. |

ಸಂಖ್ಯೆ: AGRI/99/ACT/2025

**(ಎನ್. ಚಲುವರಾಯಸ್ವಾಮಿ)**
ಕೃಷಿ ಸಚಿವರು